# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916
(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್ಐಆರ್ಎಫ್-2022: ವಿಶ್ವವಿದ್ಯಾನಿಲಯ ವರ್ಗದಲ್ಲಿ 33ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 54ನೇ ಸ್ಥಾನವನ್ನು ಹೊಂದಿದೆ)

ಸಂಖ್ಯೆ: ಪವಿ/8.6/07/ಅಧಿಸೂಚನೆ/2010-11

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು-570 005
**ದಿನಾಂಕ: 30-10-2024**

## ಅಧಿಸೂಚನೆ

ವಿಷಯ: ನವೆಂಬರ್/ಡಿಸೆಂಬರ್-2024ರಲ್ಲಿ ಜರುಗಲಿರುವ **1ನೇ** ಸೆಮಿಸ್ಟರ್‌ನ **(SEP ಪದ್ಧತಿಯ Freshers)** ಸ್ನಾತಕ ಪದವಿ (UG) ಪರೀಕ್ಷೆಯ ಬಗ್ಗೆ.

ಉಲ್ಲೇಖ: 1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಅಧಿಸೂಚನೆ ಸಂಖ್ಯೆ:ಎಸಿ7(ಎ)/59/2024-25, ದಿನಾಂಕ:26-07-2024 (ಶೈಕ್ಷಣಿಕ ವೇಳಾಪಟ್ಟಿಗೆ ಸಂಬಂಧಿಸಿರುವುದು).

2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/264/2023-24, ದಿನಾಂಕ:06-05-2024 (ಪರೀಕ್ಷಾ ಶುಲ್ಕಗಳಿಗೆ ಸಂಬಂಧಿಸಿರುವುದು).

******

ನವೆಂಬರ್/ಡಿಸೆಂಬರ್-2024ರ ಮಾಹೆಯಲ್ಲಿ ನಡೆಯಲಿರುವ **1ನೇ** ಸೆಮಿಸ್ಟರ್‌ನ **(SEP ಪದ್ಧತಿಯ Freshers)** * ಸ್ನಾತಕ ಪದವಿ ಪರೀಕ್ಷೆಗಳಾದ ಬಿ.ಎ., ಬಿ.ಎಸ್ಸಿ., ಬಿ.ಎ., (Fine Arts), ಬಿ.ವಿ.ಎ., [Visual Arts(CAVA)], ಬಿ.ಕಾಂ., ಬಿ.ಬಿ.ಎ., ಬಿ.ಎಸ್.ಡಬ್ಲ್ಯೂ., ಬಿ.ಬಿ.ಎ.(T&T)/ಬಿ.ಬಿ.ಎ.(T&H), ಮತ್ತು ಬಿ.ಸಿ.ಎ. ಪರೀಕ್ಷೆಗಳು **ದಿನಾಂಕ: 28-11-2024**ರಿಂದ ಪ್ರಾರಂಭವಾಗಲಿದೆ, ಈ ಸಂಬಂಧದ ವಿವರಗಳು ಕೆಳಕಂಡಂತಿರುತ್ತದೆ.

| ಕ್ರ.ಸಂ | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು (ವಿದ್ಯಾರ್ಥಿಗಳು "uucms.karnataka.gov.in"ಮುಖಾಂತರ ವಿದ್ಯಾರ್ಥಿಗಳ ಪೋರ್ಟಲ್‌ನಲ್ಲಿ ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಸಂದರ್ಭದಲ್ಲಿ ನಿಮ್ಮ ಕೋರ್ಸಿನ AEC/Languages, SEC ಮತ್ತು Open Elective ಪತ್ರಿಕೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು). | **10.11.2024** |
| 2 | ರೂ.100/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು (with 1st penalty) | **11.11.2024** |
| 3 | ರೂ.200/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು (with 2nd & last penalty) | **12.11.2024** |
| 4 | ಕಾಲೇಜಿನವರು ಪ್ರವೇಶ ಪತ್ರಗಳನ್ನು ಮುದ್ರಿಸಿಕೊಳ್ಳುವ ದಿನಾಂಕ | **13.11.2024** ಮತ್ತು **14.11.2024** |
| 5 | **ಪ್ರಾಯೋಗಿಕ ಪರೀಕ್ಷೆಗಳನ್ನು ಪ್ರಾರಂಭಿಸಿ ಹಾಗೂ ಪೂರ್ಣಗೊಳಿಸುವ ದಿನಾಂಕ** | **15.11.2024** ರಿಂದ **26.11.2024** |
| 6 | **$C_1$ & $C_2$**ಅಂಕಗಳನ್ನು ಆನ್‌ಲೈನ್ ಮೂಲಕ ನಮೂದಿಸಲು ಕೊನೆಯ ದಿನಾಂಕ | **27.11.2024** |
| 7 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | **28.11.2024** |

ಸೂಚನೆಗಳು:

1. 1ನೇ ಸೆಮಿಸ್ಟರ್‌ನ (SEP ಪದ್ಧತಿಯ)ಪರೀಕ್ಷಾ ಕಾರ್ಯಗಳು UUCMS ಮುಖಾಂತರ ಕಾಲೇಜಿನ ವತಿಯಿಂದ "academic moduleನಲ್ಲಿ curriculam mapping" ಮಾಡಿದ ನಂತರ, ವಿದ್ಯಾರ್ಥಿಗಳು ಆನ್‌ಲೈನ್ (UUCMS) ಮೂಲಕ ಪತ್ರಿಕೆಗಳನ್ನು ಆಯ್ಕೆ ಮಾಡಿಕೊಂಡು "mapping" ಮಾಡಕೊಳ್ಳಲು ಕಾಲೇಜಿನವರು QPCode/Course Code ಗಳನ್ನು ನೀಡಬೇಕು ಹಾಗೂ ಆನ್‌ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಗದರ್ಶನ ನೀಡಬೇಕು.
2. ಎಲ್ಲಾ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ:26.11.2024ರೊಳಗೆ ಪೂರ್ಣಗೊಳಿಸುವುದು. ಸದರಿ ಪರೀಕ್ಷೆಯನ್ನು ಬಾಹ್ಯ ಪರೀಕ್ಷಕರು (External Examiners) ನಡೆಸುವುದು.
3. ಪ್ರಾಯೋಗಿಕ ಪರೀಕ್ಷೆಗಳು ಮುಗಿದ ನಂತರ ಆ ದಿನದಂದೇ Online ಮುಖಾಂತರ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಅಂಕಗಳ ಮೂಲಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.
4. ವಿದ್ಯಾಥಿಗಳು ಭರ್ತಿ ಮಾಡಿದ ವಿಷಯಗಳ ಆಯ್ಕೆ (subject selection)ಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ, ಪರೀಕ್ಷಾ ಅರ್ಜಿಗಳಲ್ಲಿ ನ್ಯೂನತೆಗಳಿದ್ದರೆ, ಪ್ರವೇಶ ಪತ್ರಗಳ ಮುದ್ರಣಕ್ಕೆ ಪ್ರಾಂಶುಪಾಲರ ಅನುಮೋದನೆ ಪಡೆಯುವ ಮೊದಲು, ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪತ್ರಿಕೆಗಳನ್ನು ಮತ್ತೊಮ್ಮೆ ಪರಿಶೀಲಿಸಿಕೊಳ್ಳುವುದು, ಇಲ್ಲದಿದ್ದರೇ ಕಾಲೇಜಿನ ಆಡಳಿತ ವರ್ಗ ಹಾಗೂ ಪ್ರಾಂಶುಪಾಲರು ಇಂತಹ ತಪ್ಪುಗಳಿಗೆ ಹೊಣೆಗಾರರಾಗಿರುತ್ತರೆ.

## ಪರೀಕ್ಷಾ ಶುಲ್ಕಗಳ ದರಗಳು

ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ ರೂ.426/– ಗಳನ್ನು ಪಾವತಿಸುವುದು.

| | | |
|---|---|---|
| 1. | **B.A./B.P.A./B.A. (Fine Arts) B.V.A/B.Com :** | |
| | a) I Semester whole Examination<br>Per paper with Practical<br>Per paper without Practical | **Rs.1,172/-**<br>**Rs. 759/-**<br>**Rs. 585/-** |
| 2. | **B.Sc./B.C.A./B.Sc. in Family & Community Science :** | |
| | a) I Semester whole Examination<br>Per paper with Practical<br>Per paper without Practical | **Rs.1,318/-**<br>**Rs. 759/-**<br>**Rs. 585/-** |
| 3. | **B.F.A./B.B.A./B.Sc.(Sp. & Hr.)/BSW/ & B.Sc.Ed (H & I) :** | |
| | a) I Semester Whole Examination (per semester)<br>Per paper with Practical<br>Per paper without Practical | **Rs.1,730/-**<br>**Rs.1025/-**<br>**Rs.585/-** |
| 4. | **B.B.A (T&H)/B.B.A(T&T)/B.T.H./B.B.A.(T.H.M) :** | |
| | a) I Semester Whole Examination (per semester)<br>Per paper with Practical<br>Per paper without Practical | **Rs.3,328/-**<br>**Rs.1025/-**<br>**Rs.585/-** |

***Subject to a maximum of whole examination Fee fixed per semester.***

ವಿಶೇಷ ಸೂಚನೆಗಳು:

1. ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.
2. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಚಾತುರ್ಮಾಸದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ ರೂ.426/–ನ್ನು ಸಹ ಪಾವತಿಸತಕ್ಕದ್ದು.

3. ಪರೀಕ್ಷಾ ಶುಲ್ಕಗಳನ್ನು ಎಲ್ಲಾ ವರ್ಗದ ವಿದ್ಯಾರ್ಥಿಗಳು **(Freshers) "UUCMS Portal"** ನಲ್ಲಿ ನಿಗದಿಗೊಳಿಸಿರುವಂತೆ ಪಾವತಿಸುವುದು.

**ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
3. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ, ಎಂದು ಬರೆಯಿಸಿ ಪ್ರಾಂಶುಪಾಲರಿಂದ ಸಹಿ ಮಾಡಿಸಿ ಅವರ ಪ್ರವೇಶ ಪತ್ರಿಕೆಗೆ ಅಂಟಿಸಿ ಪರೀಕ್ಷಾ ಅರ್ಜಿಯೊಡನೆ ಕಾಲೇಜಿಗೆ ನೀಡಬೇಕು.
4. **ಭಾವಚಿತ್ರಗಳಿಲ್ಲದ ಹಾಗೂ ಕುಲಸಚಿವರು (ಪರೀಕ್ಷಾಂಗ) ಅಥವಾ ಪ್ರಾಂಶುಪಾಲರ ಸಹಿ/ಮೊಹರು ಇಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.**

**ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:**

1. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ (ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.
2. ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರು ಮಾಡಿದ ಕವರುಗಳಲ್ಲಿಇಟ್ಟು ಕೇಂದ್ರದಲ್ಲಿ ನಡೆಯುವಎಲ್ಲಾ ವಿಷಯಗಳ ಪ್ರಾಯೋಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮರು ದಿನವೇ ಕಳುಹಿಸಬೇಕು. ಈ ದಿನಾಂಕ ಮೀರಿಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ.
3. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕ್ಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.
4. ವಿದ್ಯಾರ್ಥಿಗಳು ಗೈರುಹಾಜರಾದಲ್ಲಿ ಆ ಪರೀಕ್ಷಾ ದಿನದಂದೇ ಆನ್‌ಲೈನ್ ಮುಖಾಂತರ ಗೈರುಹಾಜರಿಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ಮಾನಸಗಂಗೋತ್ರಿ, ಮೈಸೂರು ಮತ್ತು ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ದಾರ್ಥನಗರ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾಧಿಕಾರಿಗಳ ಕಛೇರಿ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆ, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.